ಪಟ್ಟಿಯಲ್ಲಿ ಸೇರಿಸಲಾದ ಪ್ರಶ್ನೋತ್ತರಗಳು

ಮೂಡಿಗೆರೆ ಎಂ.ಜಿ.ಎಂ. ಆಸ್ಪತ್ರೆಯಲ್ಲಿರುವ ಡೆಂಟಲ್ ಯೂನಿಟ್

೩೪೪. ಶ್ರೀಮತಿ ಮೋಟಮ್ಮ (ಮೂಡಿಗೆರೆ):—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮೂಡಿಗೆರೆ ಎಂ.ಜಿ.ಎಂ. ಆಸ್ಪತ್ರೆಗೆ ಡೆಂಟಲ್ ಯೂನಿಟ್ ಮಂಜೂರಾಗಿರುವುದು ಯಾವಾಗ ?

ಆ) ಈವರೆವಿಗೂ ಅಲ್ಲಿಗೆ ವೈದ್ಯಾಧಿಕಾರಿಯನ್ನು ನೇಮಿಸಿಲ್ಲದ್ದಕ್ಕೆ ಕಾರಣಗಳೇನು ? ಮತ್ತು ವೈದ್ಯಾಧಿಕಾರಿಗಳನ್ನು ನೇಮಿಸಲು ಕ್ರಮ ತೆಗೆದುಕೊಳ್ಳಲಾಗುವುದೆ ?

ಶ್ರೀಮತಿ ಮನೋರಮಾ ಮಾಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

೧) ೧೯೮೦ರಲ್ಲಿ

೨) ಕಳೆದ ೩-೪ ವರ್ಷಗಳಿಂದಲೂ ನೇಮಕಾತಿಗಳನ್ನು ರದ್ದುಗೊಳಿಸಿರುವ ಕಾರಣ ಸಹಾಯಕ ದಂತ ವೈದ್ಯರ ಹುದ್ದೆಯನ್ನು ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ.

ಚೆಂಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

೩೪೫. ಶ್ರೀ ಎಂ. ವೀರಪ್ಪಮೊಯ್ಲಿ.—ಸನ್ಮಾನ್ಯ ಉಪಾಧ್ಯಕ್ಷಣಿಯವರೆ, ದಿನಾಂಕ ೩-೪-೧೯೯೦ರ ಲಿಖಿತ ಮೂಲಕ ಉತ್ತರಿಸುವ ಮೊದಲನೇ ಪಟ್ಟಿಯಲ್ಲಿನ ೨೦ ಪ್ರಶ್ನೆಗಳ ಪೈಕಿ ಪ್ರಶ್ನೆಗಳ ಸಂಖ್ಯೆ ೩೬, ೩೯ ಮತ್ತು ೧೮೨ ಪ್ರಶ್ನೆಗಳನ್ನು ಹೊರತುಪಡಿಸಿ, ಇನ್ನುಳಿದ ೧೭ ಪ್ರಶ್ನೆಗಳ ಉತ್ತರಗಳನ್ನು ಸಭೆಯ ಮುಂದೆ ಮಂಡಿಸಿತ್ತೇನೆ.

ರಾಜ್ಯದಲ್ಲಿರುವ ಹುಲಿಗಳ ಸಂಖ್ಯೆಯ ಬಗ್ಗೆ

೩೪೬. ಶ್ರೀ ಜಿ. ರಾಜೂಗೌಡ (ಹನೂರು).— ಮಾನ್ಯ ಅರಣ್ಯ ಮತ್ತು ಪಶುಸಂಗೋಪನೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

೧) ನಾಗರಹೊಳೆ ಪ್ರದೇಶದಲ್ಲಿ ೧೯೮೯-೯೦ನೇ ಮಾರ್ಚ್‌ವರೆಗೆ ಇದ್ದ ಹುಲಿಗಳ ಸಂಖ್ಯೆ ಎಷ್ಟು?

೨) ಅವುಗಳಲ್ಲಿ ಗಂಡು ಮತ್ತು ಹೆಣ್ಣು ಹುಲಿಗಳ ಸಂಖ್ಯೆ ಎಷ್ಟು ?

೩) ಈ ರಾಜ್ಯದಲ್ಲಿ ಯಾವ ಯಾವ ಅರಣ್ಯ ಪ್ರದೇಶದಲ್ಲಿ ಎಷ್ಟೆಷ್ಟು ಹುಲಿಗಳಿವೆ ?

೪) ಕಳೆದ ೩ ತಿಂಗಳಲ್ಲಿ ನಾಗರಹೊಳೆ ಪ್ರದೇಶದಲ್ಲಿ ಹುಲಿಗಳು ಸತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು ?

ಶ್ರೀ ಬಿ. ಬಸವಲಿಂಗಪ್ಪ (ಅರಣ್ಯ ಮತ್ತು ಪಶುಸಂಗೋಪನೆ ಮಂತ್ರಿಗಳು).—

೧) ೨೧ ಹುಲಿಗಳು.

೨) ೮ ಗಂಡು ಹುಲಿಗಳು
೧೧ ಹೆಣ್ಣು ಹುಲಿಗಳು
೨ ಪುರಿ ಹುಲಿಗಳು

ಒಟ್ಟು ೨೧